## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಮಂಗಳೂರು ಮತ್ತು ಉಡುಪಿ ಜಲಾನಯನ ಅಭಿವೃದ್ಧಿ ಕಾಮಗಾರಿ ಅವ್ಯವಹಾರ ಬಗ್ಗೆ ಶಿಸ್ತು ಕ್ರಮ.

**ಓದಲಾಗಿದೆ:**

1) ಸರ್ಕಾರದ ಆದೇಶ ಸಂಖ್ಯೆ: ಕೃತೋಇ 2 ಕೃಪವಿ 2007, ದಿನಾಂಕ: 29-01-2011.
2) ಸರ್ಕಾರದ ತಿದ್ದುಪಡಿ ಆದೇಶ ಸಂಖ್ಯೆ: ಕೃಇ 36 ಕೃಪವಿ 2011, ದಿನಾಂಕ: 22-10-2011.
3) ಮಹಾಲೇಖಪಾಲರ ಪತ್ರ ಸಂಖ್ಯೆ: ಜಿಇ-5/ಎಜಿ-5/ಎಂ-09/2012-13/1489-1490, ದಿನಾಂಕ: 05-12-2012.

*********

**ಪ್ರಸ್ತಾವನೆ:**

ಮೇಲೆ ಕ್ರಮ ಸಂಖ್ಯೆ: (1)ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ಮಂಗಳೂರು ಮತ್ತು ಉಡುಪಿ ಜಿಲ್ಲೆಯ ಜಲಾನಯನ ಅಭಿವೃದ್ಧಿ ಕಾಮಗಾರಿಗಳಲ್ಲಿ ಕಂಡು ಬಂದ ಲೋಪದೋಷಗಳ ಬಗ್ಗೆ ಸಲ್ಲಿಸಿದ ತನಿಖಾ ವರದಿಯ ಆಧಾರದ ಮೇಲೆ ಆರೋಪ ಸಾಬೀತಾದ ಶ್ರೀ.ಪಿ.ಎಫ್.ಮಿರಾಂಡ ಹಿಂದಿನ ಕೃಷಿ ಅಧಿಕಾರಿ, ಜ.ಅ.ಇ. ಮಂಗಳೂರು ಇವರಿಗೆ ಕರ್ನಾಟಕ ನಾಗರಿಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 8(iii)ರನ್ವಯ ಒಂದು ವಾರ್ಷಿಕ ವೇತನ ಬಡ್ತಿಯನ್ನು ಸಂಚಿತ ಪರಿಣಾಮ ಬೀರುವಂತೆ ಒಂದು ವರ್ಷದವರೆಗೆ ತಡೆಹಿಡಿಯುವ ದಂಡನೆಯನ್ನು ವಿಧಿಸಿ ಆದೇಶಿಸಲಾಗಿತ್ತು.

ಸರ್ಕಾರ ಹೊರಡಿಸಿದ ಆದೇಶದಲ್ಲಿ ದಂಡನೆಯ ಬಗ್ಗೆ ಸ್ಪಷ್ಟತೆ ಇಲ್ಲದಿರುವುದರಿಂದ ಮೇಲೆ ಕ್ರಮ ಸಂಖ್ಯೆ: (2) ರಲ್ಲಿ ಓದಲಾದ ಸರ್ಕಾರದ ತಿದ್ದುಪಡಿ ಆದೇಶದಲ್ಲಿ ಒಂದು ವಾರ್ಷಿಕ ವೇತನ ಬಡ್ತಿಯನ್ನು ಸಂಚಿತ ಪರಿಣಾಮ ಬೀರುವಂತೆ ಒಂದು ವರ್ಷದವರೆಗೆ ತಡೆಹಿಡಿಯುವ ದಂಡನೆಯನ್ನು ವಿಧಿಸಿ ಆದೇಶಿಸಿದೆ ಎಂಬುದರ ಬದಲಾಗಿ ಒಂದು ವಾರ್ಷಿಕ ವೇತನ ಬಡ್ತಿಯನ್ನು ಸಂಚಿತ ಪರಿಣಾಮ ಬೀರುವಂತೆ ತಡೆಹಿಡಿಯುವ ದಂಡನೆಯನ್ನು ವಿಧಿಸಿ ಆದೇಶಿಸಲಾಗಿದೆ.

ಮಹಾಲೇಖಪಾಲರು ಮೇಲೆ ಕ್ರಮ ಸಂಖ್ಯೆ: (3)ರಲ್ಲಿ ಓದಲಾದ ತಮ್ಮ ಪತ್ರದಲ್ಲಿ ಶ್ರೀ ಪಿ.ಎಫ್. ಮಿರಾಂಡ, ಸಹಾಯಕ ಕೃಷಿ ನಿರ್ದೇಶಕರು, (ಸ್ವತಂತ್ರ ಪ್ರಭಾರ) ಇವರು ತಮ್ಮ ವೇತನ ಶ್ರೇಣಿಯ ಗರಿಷ್ಠ ಹಂತವನ್ನು ತಲುಪಿದ್ದು, ಅವರಿಗೆ ಮುಂದಿನ ವೇತನ ಬಡ್ತಿಗಳು ಲಭ್ಯವಾಗುವುದಿಲ್ಲ. ಆದ್ದರಿಂದ ಅವರಿಗೆ ವಾರ್ಷಿಕ ವೇತನ ಬಡ್ತಿಯನ್ನು ತಡೆಹಿಡಿಯುವ ದಂಡನೆಯನ್ನು ವಿಧಿಸಲು ಸಾಧ್ಯವಾಗುವುದಿಲ್ಲ ಆದ್ದರಿಂದ ಈ ಬಗ್ಗೆ ತೆಗೆದುಕೊಳ್ಳಬೇಕಾದ ಮುಂದಿನ ಕ್ರಮದ ಬಗ್ಗೆ ಮಾರ್ಗದರ್ಶನ ಕೋರಿರುತ್ತಾರೆ.

ಮಹಾಲೇಖಪಾಲರ ವರದಿಯಂತೆ ಪರಿಶೀಲಿಸಿ, ವೇತನ ಬಡ್ತಿಯನ್ನು ಸಂಚಿತ ಪರಿಣಾಮ ಬೀರುವಂತೆ ತಡೆಹಿಡಿಯುವ ದಂಡನೆಗೆ ಪರ್ಯಾಯವಾಗಿ ಕರ್ನಾಟಕ ನಾಗರಿಕ ಸೇವಾ

--2--

19

(ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿ 1957ರ ನಿಯಮ 8(4)(ಎ)ರಡಿಯಲ್ಲಿ ಶ್ರೀ ಪಿ.ಎಫ್. ಮಿರಾಂಡ, ಸಹಾಯಕ ಕೃಷಿ ನಿರ್ದೇಶಕರು, (ಸ್ವತಂತ್ರ ಪ್ರಭಾರ) ಇವರು ಪ್ರಸ್ತುತ ಪಡೆಯುತ್ತಿರುವ ಕಾಲಿಕ ವೇತನ ಶ್ರೇಣಿಯಲ್ಲಿ ಎರಡು ಹಂತವನ್ನು ಕೆಳಗಿಳಿಸುವ ದಂಡನೆಯನ್ನು ವಿಧಿಸಲು ತೀರ್ಮಾನಿಸಿದೆ ಆದ್ದರಿಂದ ಈ ಕೆಳಕಂಡ ಆದೇಶ.

**<u>ಸರ್ಕಾರದ ಆದೇಶ ಸಂಖ್ಯೆ: ಕೃಇ 04 ಕೃಪವಿ 2013.</u>**
**<u>ಬೆಂಗಳೂರು, ದಿನಾಂಕ: 22-05-2013.</u>**

ಪ್ರಸ್ತಾವನೆಯಲ್ಲಿ ವಿವರಿಸಲಾದ ಕಾರಣಗಳಿಂದಾಗಿ ಶ್ರೀ ಪಿ.ಎಫ್. ಮಿರಾಂಡ, ಸಹಾಯಕ ಕೃಷಿ ನಿರ್ದೇಶಕರು, (ಸ್ವತಂತ್ರ ಪ್ರಭಾರ) ಇವರಿಗೆ ಕರ್ನಾಟಕ ನಾಗರಿಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿ 1957ರ ನಿಯಮ 8(iv)(ಎ)ರ ಅನ್ವಯ ಪ್ರಸ್ತುತ ಅವರು ಪಡೆಯುತ್ತಿರುವ ರೂ. 22,800-43,200ರ ವೇತನ ಶ್ರೇಣಿಯಲ್ಲಿ, ವೇತನ ರೂ. 43,200ರನ್ನು ಎರಡು ಹಂತಕ್ಕೆ ಅಂದರೆ 41,100ಕ್ಕೆ ಎರಡು ವರ್ಷದ ಅವಧಿಗೆ ಕೆಳಗಿಳಿಸುವ ದಂಡನೆಯನ್ನು ವಿಧಿಸಿದೆ. ಈ ದಂಡನೆಯನ್ನು ವಿಧಿಸಿದ ಅವಧಿಯಲ್ಲಿ ಶ್ರೀ ಪಿ.ಎಫ್. ಮಿರಾಂಡ, ಸಹಾಯಕ ಕೃಷಿ ನಿರ್ದೇಶಕರು, (ಸ್ವತಂತ್ರ ಪ್ರಭಾರ) ಇವರಿಗೆ ವಾರ್ಷಿಕ ವೇತನ ಬಡ್ತಿಯನ್ನು ಗಳಿಸಲು ಅನುಮತಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಹಾಗೂ ಅವರ ಹೆಸರಿನಲ್ಲಿ.

(ಮಂಜುನಾಥ ಪಾಟೀಲ)
ಸರ್ಕಾರದ ಅಧೀನ ಕಾರ್ಯದರ್ಶಿ,
ಕೃಷಿ ಇಲಾಖೆ.

**<u>ಇವರಿಗೆ:-</u>**
1) ಅಕೌಂಟ್ಸ್ ಆಫೀಸರ್, ಜಿಇ-5, ಮಹಾಲೇಖಪಾಲರ ಕಛೇರಿ, (ಲೆಕ್ಕ ಪತ್ರ ಮತ್ತು ಲೆಕ್ಕ ತಪಾಸಣೆ) ಹೊಸಕಟ್ಟಡ, ಬೆಂಗಳೂರು-1.
2) ಆಯುಕ್ತರು, ಕೃಷಿ ಇಲಾಖೆ, ಶೇಷಾದ್ರಿ ರಸ್ತೆ, ಬೆಂಗಳೂರು.
3) ಆಯುಕ್ತರು, ಜಲಾನಯನ ಅಭಿವೃದ್ಧಿ ಇಲಾಖೆ, ಬೆಂಗಳೂರು.
4) ಜಿಲ್ಲಾ ಜಲಾನಯನ ಅಭಿವೃದ್ಧಿ ಅಧಿಕಾರಿ, ಉಡುಪಿ.
5) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕೃಷಿ ಇಲಾಖೆ, ಇವರ ಆಪ್ತ ಕಾರ್ಯದರ್ಶಿ.
6) ಸರ್ಕಾರದ ಉಪ ಕಾರ್ಯದರ್ಶಿ, ಕೃಷಿ ಇಲಾಖೆ.
7) ಸಂಬಂಧಿಸಿದ ಅಧಿಕಾರಿಗಳು/ನೌಕರರು(ಆಯುಕ್ತರು,ಜಲಾನಯನ ಅಭಿವೃದ್ಧಿ ಇಲಾಖೆ, ಇವರ ಮೂಲಕ
8) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.